## 62. ಶ್ರೀರಾಮ ಮಂದಿರಕ್ಕೆ ಶಿಲಾನ್ಯಾಸ ಹಿನ್ನೆಲೆ ರಾಜ್ಯದಲ್ಲಿ ಕಟ್ಟೆಚ್ಚರಕ್ಕೆ ಸೂಚನೆ

ಉತ್ತರಪ್ರದೇಶದ ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರ ಶಿಲಾನ್ಯಾಸ ಮತ್ತು ಭೂಮಿ ಪೂಜೆ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಸುಸ್ಥಿತಿಯಲ್ಲಿಡಲು ಸರ್ಕಾರ ಕಟ್ಟೆಚ್ಚರದ ಕ್ರಮಗಳನ್ನು ಕೈಗೊಂಡಿದೆ.

ಗೃಹ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಗೃಹ ಸಚಿವ ಬಸವರಾಜ ಬೊಮ್ಮಾಯಿ ವಿಡಿಯೋ ಸಂವಾದ ನಡೆಸಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಬೇಕು. ಅಗತ್ಯಬಿದ್ದರೆ 144ನೇ ಸೆಕ್ಷನ್ ಅನ್ವಯ ನಿಷೇಧಾಜ್ಞೆ ಜಾರಿಗೆ ಅನುಮತಿ ನೀಡಿದ್ದಾರೆ.

**ಗೂಂಡಾ ಕಾಯ್ದೆ ಬಳಕೆ:** ಕಾನೂನು ಉಲ್ಲಂಘಿಸುವವರ ವಿರುದ್ಧ ಗೂಂಡಾ ಕಾಯ್ದೆ ಬಳಸುವುದರ ಜೊತೆಗೆ ಅಗತ್ಯ ಕಾನೂನು ಕ್ರಮ ಕೈಗೊಳ್ಳಬೇಕು. ಜೊತೆಗೆ ಆಯಾ ಠಾಣೆಗಳ ವ್ಯಾಪ್ತಿಯಲ್ಲಿ ಗೂಂಡಾ ಲಿಸ್ಟ್‌ನಲ್ಲಿ ಇರುವವರಿಗೆ ಎಚ್ಚರಿಸಿ, ಅಗತ್ಯ ಬಿದ್ದರೆ ಬಂಧಿಸಿ ಎಂದು ಗೃಹ ಸಚಿವರು ಆದೇಶಿಸಿದ್ದಾರೆ. ದೇವಸ್ಥಾನ ಹಾಗೂ ಪ್ರಾರ್ಥನಾ ಮಂದಿರಗಳಿಗೆ ಬಂದೋಬಸ್ತ್ ವ್ಯವಸ್ಥೆ ಮಾಡುವಂತೆ ಸೂಚಿಸಿದ್ದು, ಮದ್ಯ ಮಾರಾಟದ ಕುರಿತು ಸ್ಥಳೀಯವಾಗಿ ನಿರ್ಧರಿಸುವ ಅಧಿಕಾರವನ್ನು ಜಿಲ್ಲಾಡಳಿತಕ್ಕೆ ನೀಡಿದ್ದಾರೆ.

**ಡ್ರೋಣ್ ಸಮೀಕ್ಷೆ:** ಸೂಕ್ಷ್ಮ ಪ್ರದೇಶಗಳಲ್ಲಿ ಡ್ರೋಣ್ ಕಣ್ಗಾವಲಿರಿಸಿ ಸಮೀಕ್ಷೆ ವ್ಯವಸ್ಥೆ ಮಾಡಬೇಕು. ಇದರಿಂದಾಗಿ ಪರಿಣಾಮಕಾರಿ ನಿಗಾ ಸಾಧ್ಯವಾಗಲಿದ್ದು, ತ್ವರಿತ ಕ್ರಮಗಳಿಗೂ ನೆರವಾಗುತ್ತದೆ. ತಹಶೀಲ್ದಾರ್ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಬೇಕು ಎಂದು ಸಚಿವರು ತಾಕೀತು ಮಾಡಿದ್ದಾರೆ.

ಅಯೋಧ್ಯೆ ಭೂಮಿ ಪೂಜೆ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡುವಂತಿಲ್ಲ. ಅಹಿತಕರ ಘಟನೆಗಳಿಗೆ ಅವಕಾಶ ಇಲ್ಲವೆಂದು ಗೃಹ ಸಚಿವರು ಖಡಕ್ ಎಚ್ಚರಿಕೆ ನೀಡಿದ್ದಾರೆ.

**ಮನೆ, ಮಂದಿರದೊಳಗೆ ಸಂಭ್ರಮಾಚರಿಸಿ :** ಶ್ರೀರಾಮ ಮಂದಿರ ನಿರ್ಮಾಣಕ್ಕೆ ಶಿಲಾನ್ಯಾಸದ ಸಂಭ್ರಮ, ಸಭೆ-ಸಮಾರಂಭಗಳನ್ನು ತಂತಮ್ಮ ಮನೆ, ಮಂದಿರದೊಳಗೆ ಆಚರಿಸುವ ಮೂಲಕ ಕೊರೋನಾ ಸೋಂಕು ನಿಯಂತ್ರಣಕ್ಕಾಗಿ ಕೇಂದ್ರ ಸರ್ಕಾರ ನೀಡಿದ ನಿರ್ದೇಶನಗಳನ್ನು ಪಾಲಿಸಬೇಕು ಎಂದು ರಾಜ್ಯದ ಜನತೆಗೆ ಗೃಹ ಸಚಿವರು ಮನವಿ ಮಾಡಿದ್ದಾರೆ.

**ಜಾಲತಾಣಗಳ ಮೇಲೆ ನಿಗಾ:** ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ ಇರಲಿದೆ. ಕಾನೂನುಬಾಹಿರ ವಿಚಾರ ಪ್ರಕಟಿಸುವವರ ವಿರುದ್ಧ ಕ್ರಮ ಕೈಗೊಳ್ಳಲು ಗೃಹ ಇಲಾಖೆ ಅಧಿಕಾರಿಗಳು ನಿರ್ಧರಿಸಿದ್ದಾರೆ.

**ಗಡಿಗಳಲ್ಲೂ ಬಿಗಿ ಕಾವಲು:** ಗಡಿಭಾಗಗಳಾದ ಚಾಮರಾಜನಗರ, ಮಡಿಕೇರಿ, ಬೆಳಗಾವಿ, ಮಂಗಳೂರು, ಕೋಲಾರ, ಕಲಬುರಗಿ ಜಿಲ್ಲೆಗಳ ಚೆಕ್‌ಪೋಸ್ಟ್‌ಗಳಲ್ಲಿ ಕಾವಲು ಮತ್ತಷ್ಟು ಬಿಗಿಗೊಳಿಸಲಾಗಿದೆ. ರಾಜ್ಯ ಪ್ರವೇಶಿಸುವ ಸಂಶಯಾಸ್ಪದ ವ್ಯಕ್ತಿಗಳ ಮೇಲೆ ನಿಗಾ ಇಟ್ಟು ಎಚ್ಚರದಿಂದಿರಬೇಕು. ಮೈಸೂರು, ಬೆಂಗಳೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ಕಲಬುರಗಿ ನಗರಗಳ ಕಮೀಷನರ್‌ಗಳು ವಿಶೇಷವಾಗಿ ತಮ್ಮ ವ್ಯಾಪ್ತಿ ಪ್ರದೇಶದತ್ತ ಗಮನ ಇಡಬೇಕೆಂದು ಅಧಿಕಾರಿಗಳಿಗೆ ಗೃಹ ಸಚಿವರು ನಿರ್ದೇಶನ ನೀಡಿದ್ದಾರೆ.

ಆಧಾರ:ವಿಜಯವಾಣಿ, ದಿನಾಂಕ:05.08.2020